## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 605 |
| ಸದಸ್ಯರ ಹೆಸರು | : | ಶ್ರೀ ಎನ್ ಎಸ್. ಬೋಸ್‌ರಾಜು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20-08-2026 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿ ಬರುವ ಮಾನ್ವಿ, ಕವಿತಾಳ ಮಸ್ಕಿ ಪಟ್ಟಣಗಳಲ್ಲಿ ಕುಡಿಯುವ ನೀರಿಗಾಗಿ ಅಮೃತ್ ಯೋಜನೆ-2 ಮಂಜೂರಾತಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕಾಲಮಿತಿ ಅವಧಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯ ಮಾನ್ವಿ, ಕವಿತಾಳ ಮತ್ತು ಮಸ್ಕಿ ಪಟ್ಟಣಗಳಲ್ಲಿ ಕುಡಿಯುವ ನೀರು ಪೂರೈಕೆಗಾಗಿ ಅಮೃತ್ 2.0 ಯೋಜನೆಯಡಿ ಕಾಮಗಾರಿ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br>ಟೆಂಡರ್ ಕರಾರಿನನ್ವಯ ಕಾಮಗಾರಿ ಪೂರ್ಣಗೊಳಿಸಬೇಕಾಗಿದ್ದರೂ, ಗುತ್ತಿಗೆದಾರರಿಂದ ಉಂಟಾದ ವಿಳಂಬ ಹಾಗೂ ಕೆಲವು ಸ್ಥಳಗಳಲ್ಲಿ ಎದುರಾದ ಸಮಸ್ಯೆಗಳ ಕಾರಣದಿಂದ ಕಾಮಗಾರಿ ಪೂರ್ಣಗೊಂಡಿರುವುದಿಲ್ಲ. ಕಾಮಗಾರಿಯ ವಿಳಂಬಕ್ಕೆ ಸಂಬಂಧಿಸಿದಂತೆ ಗುತ್ತಿಗೆದಾರರಿಗೆ ನೋಟೀಸ್‌ಗಳನ್ನು ನೀಡಲಾಗಿರುತ್ತದೆ. ಕಾಮಗಾರಿಯನ್ನು ಮಾರ್ಚ್ 2027ರ ಅಂತ್ಯದೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. |
| ಆ) | ಈ ಕಾಮಗಾರಿಗಳಿಗೆ ಬಂದಿರುವ ದೂರುಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡು ಕ್ರಮಗಳೇನು? | ಸದರಿ ಕಾಮಗಾರಿಗೆ ಸಂಬಂಧಿಸಿದಂತೆ ರಸ್ತೆ ಅಗೆತ ಹಾಗೂ ಕಾಮಗಾರಿ ವಿಳಂಬದ ಕುರಿತು ದೂರುಗಳು ಸ್ವೀಕೃತವಾಗಿದ್ದು, ಸದರಿ ದೂರುಗಳ ಕುರಿತು ಸ್ಥಳ ಪರಿಶೀಲನೆ ನಡೆಸಿ ಸಮಸ್ಯೆಗಳನ್ನು ಪರಿಹರಿಸಲಾಗುತ್ತಿದೆ. ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ. |

ಸಂಖ್ಯೆ: ನಅಇ 197 ಸಿಎಸ್‌ಎಸ್ 2026

**(ಡಾ. ಯತೀಂದ್ರ ಸಿದ್ದರಾಮಯ್ಯ)**
ನಗರಾಭಿವೃದ್ಧಿ ಸಚಿವರು